## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗಂಗಾ ಕಲ್ಯಾಣ ಯೋಜನೆಯ ಸೌಲಭ್ಯ ಪಡೆಯಲು ಫಲಾನುಭವಿಗಳಿಗೆ ನಿಗಧಿಪಡಿಸಿರುವ 60 ವರ್ಷ ವಯೋಮಿತಿಯನ್ನು ರದ್ದುಗೊಳಿಸುವ ಬಗ್ಗೆ.

ಓದಲಾಗಿದೆ:
1.ಸರ್ಕಾರದ ಆದೇಶ ಸಂಖ್ಯೆ: ಸಕಇ 197 ಆರ್ & ಐ 2022, ದಿನಾಂಕ:02.09.2022.
2.ಸರ್ಕಾರದ ಆದೇಶ ಸಂಖ್ಯೆ:ಸಕಇ 252 ಎಸ್ ಡಿಸಿ 2022, ದಿನಾಂಕ:17.09.2022.
3.ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂಡಿ 638 ಬಿಎಂಎಸ್ 2022, ದಿನಾಂಕ:29.10.2022.
4.ವ್ಯವಸ್ಥಾಪಕ ನಿರ್ದೇಶಕರು, ಡಾ ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ ಇವರ ಪತ್ರ ಸಂಖ್ಯೆ:ಅಂಅನಿ/ಗಂಕಯೋ/02/2022-23, ದಿನಾಂಕ:17.12.2022.

******

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮಾಂಕ(1)ರಲ್ಲಿ ಗಂಗಾಕಲ್ಯಾಣ ಯೋಜನೆಯಡಿ ಫಲಾನುಭವಿಗೆ ನಿಗಧಿಪಡಿಸಿದ 55 ವರ್ಷದ ವಯೋಮಿತಿಯ ನಿರ್ಬಂಧ ವನ್ನು ತೆಗೆದುಹಾಕಬಹುದು ಎಂದು ಶಿಫಾರಸ್ಸು ಮಾಡಲಾಗಿದೆ.

ಮೇಲೆ ಓದಲಾದ ಕ್ರಮಾಂಕ(2)ರಲ್ಲಿ ಪರಿಶಿಷ್ಟ ಜಾತಿಯ ನಿರುದ್ಯೋಗಿ ಯುವಕ/ಯವತಿಯರ ಹಿತದೃಷ್ಟಿಯಿಂದ ಬ್ಯಾಂಕ್ ಸಹಯೋಗದೊಂದಿಗೆ ಅನುಷ್ಠಾನಗೊಳಿಸುತ್ತಿರುವ ಯೋಜನೆಯನ್ನು ಹೊರತುಪಡಿಸಿ ನಿಗಮದಿಂದ ನೇರವಾಗಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳಿಗೆ ಹಾಗೂ ಕೃಷಿ ಮತ್ತು ಕೃಷಿ ಆಧಾರಿತ ಚುಟುವಟಿಕೆಗಳ ಫಲಾನುಭಿವಿಗಳಿಗೆ ಕನಿಷ್ಠ 21 ವರ್ಷಗಳಿಂದ ಗರಿಷ್ಟ 60 ವರ್ಷಗಳಿಗೆ ಹೆಚ್ಚಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ(3)ರಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವ್ಯಾಪ್ತಿಯಲ್ಲಿನ ಎಲ್ಲಾ ನಿಗಮಗಳಲ್ಲಿ ಅನುಷ್ಠಾನಗೊಳಿಸುತ್ತಿರುವ ಗಂಗಾಕಲ್ಯಾಣ ಯೋಜನೆಯ ಸೌಲಭ್ಯವನ್ನು ಪಡೆಯಲು ಫಲಾನುಭವಿಗಳ ಗರಿಷ್ಟ ವಯೋಮಿತಿಯನ್ನು 60 ವರ್ಷಕ್ಕೆ ಸೀಮಿತಗೊಳಿಸಿರುವ ಆದೇಶವನ್ನು ರದ್ದುಗೊಳಿಸಿ ಜಂಟಿ ಖಾತೆಯಲ್ಲಿರುವ ಅರ್ಹ ಅರ್ಜಿದಾರರನ್ನು ಪರಿಗಣಿಸಲು ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ(4)ರಲ್ಲಿ ಡಾ|| ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ ಇವರು ಮಾನ್ಯ ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ಜರುಗಿದ ದಿನಾಂಕ:07.12.2022ರ ಸಭೆಯಲ್ಲಿ ಗಂಗಾ ಕಲ್ಯಾಣ ಯೋಜನೆಗೆ ನಿಗಧಿಪಡಿಸಿರುವ ಗರಿಷ್ಟ ವಯೋಮಿತಿಯ ನಿರ್ಬಂಧವನ್ನು ತೆಗೆದುಹಾಕಲು ಸೂಚಿಸಿರುತ್ತಾರೆಂದು ತಿಳಿಸಿ, ಗರಿಷ್ಟ 60 ವರ್ಷಗಳ ವಯೋಮಿತಿಯ ನಿರ್ಬಂಧವನ್ನು ತೆಗೆದು ಹಾಕಲು ಮತ್ತು ಜಂಟಿ ಖಾತೆಯಲ್ಲಿರುವ ಅರ್ಹ ಅರ್ಜಿದಾರರನ್ನು ಪರಿಗಣಿಸಲು ಆದೇಶ ಹೊರಡಿಸುವಂತೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿದ್ದಾರೆ.

...2

ವ್ಯವಸ್ಥಾಪಕ ನಿರ್ದೇಶಕರು, ಡಾ ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ ಇವರ ಪ್ರಸ್ತಾವನೆ ಹಾಗೂ ಲಭ್ಯವಿರು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದೆ, ಸರ್ಕಾರವು ಸಮಾಜ ಕಲ್ಯಾಣ ಇಲಾಖೆ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ನಿಗಮಗಳ ಮೂಲಕ ಅನುಷ್ಠಾನಗೊಳಿಸುತ್ತಿರುವ ಗಂಗಾ ಕಲ್ಯಾಣ ಯೋಜನೆ ಸೌಲಭ್ಯವನ್ನು ಪಡೆಯಲು ಫಲಾನುಭವಿಗಳಿಗೆ ನಿಗಧಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ತೆಗೆದುಹಾಕಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಕಇ 252 ಎಸ್‌ಡಿಸಿ 2022, ಬೆಂಗಳೂರು, ದಿನಾಂಕ:13.01.2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸಮಾಜ ಕಲ್ಯಾಣ ಇಲಾಖೆ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ನಿಗಮಗಳ ಮೂಲಕ ಅನುಷ್ಠಾನಗೊಳಿಸುತ್ತಿರುವ ಗಂಗಾ ಕಲ್ಯಾಣ ಯೋಜನೆ ಸೌಲಭ್ಯವನ್ನು ಪಡೆಯಲು ಫಲಾನುಭವಿಗಳಿಗೆ ನಿಗಧಿಪಡಿಸಿರುವ 60 ವರ್ಷದ ಗರಿಷ್ಠ ವಯೋಮಿತಿಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ತೆಗೆದುಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ವಿ.ಪ್ರಕಾಶ್)
ಸರ್ಕಾರದ ಉಪ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

13/01/23

**ಇವರಿಗೆ:**

1. ಮಹಾಲೇಖಪಾಲರು, (ಎ&ಇ, ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಡಾ ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ

**ಪ್ರತಿ ಮಾಹಿತಿಗಾಗಿ:-**

1. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
2. ಸರ್ಕಾರದ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ನೋಡಲ್ ಸಲಹೆಗಾರರು, ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆ,ಇವರ ಆಪ್ತ ಕಾರ್ಯದರ್ಶಿ, ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿ-3 ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.